ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಪ್ರವಾಸೋದ್ಯಮ ಇಲಾಖೆಯಲ್ಲಿ ಪದವೀಧರರಿಗೆ ಯೋಜನೆಗಳು

ಶ್ರೀ ಚಿದಾನಂದ್ ಎಂ. ಗೌಡ(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) –

285 (448) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆ ಗುರುತಿಸಲ್ಪಟ್ಟಿರುವ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರವಾಸೋದ್ಯಮ ಇಲಾಖೆ ಗುರುತಿಸಿರುವ ಪ್ರವಾಸಿ ತಾಣಗಳಲ್ಲಿ ಕೈಗೊಳ್ಳುವ ಯೋಜನೆಗಳು ಯಾವುವು; (ವಿವರಣೆ ನೀಡುವುದು)

(ಇ) ಹೊಸದಾಗಿ ಪ್ರವಾಸಿ ತಾಣಗಳನ್ನು ಗುರುತಿಸಿ ಅವುಗಳನ್ನು ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ಪ್ರವಾಸೋದ್ಯಮ ಇಲಾಖೆ, ಪ್ರವಾಸೋದ್ಯಮದ ಬೆಳವಣಿಗೆಯಲ್ಲಿ ನಿರುದ್ಯೋಗಿ ಪದವೀಧರ ಯುವಕರು ಸಕ್ರಿಯವಾಗಿ ಪಾಲ್ಗೊಳ್ಳುವಂತಾಗಲು ಯೋಜನೆಗಳನ್ನು ರೂಪಿಸಿದೆಯೇ?